**ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಹಾನಗಲ್**

**ಸಿ.ಸಿ ನಂ.776/2021**

| | | | | |
|---|---|---|---|---|
| ಸಾಕ್ಷಿದಾರರ ಹೆಸರು | : | ವಿಜಯಕುಮಾರ ಬೈಲವಾಳ ಉರ್ಫ ಪಾಟೀಲ | ಪಿಡಬ್ಲ್ಯೂ | 6 |
| ತಂದೆಃಗಂಡನ ಹೆಸರು | : | ಪ್ರಭುಗೌಡ | ಸಿಡಬ್ಲ್ಯೂ | 9 |
| ವಯಸ್ಸು | : | 52 ವರ್ಷ | | |
| ಉದ್ಯೋಗ | : | ವ್ಯವಸಾಯ | | |
| ವಾಸ ಸ್ಥಳ | : | ಹೊಂಬಳಿ | | |

**ದಿನಾಂಕ: 21.01.2025 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಸಹಾಯಕ ಸರಕಾರಿ ಅಭಿಯೋಜಕರಿಂದ:**

ನನಗೆ ಚಾಸಾ-1, 6 ರಿಂದ 8 ರವರ ಪರಿಚಯ ಇದೆ. ನನಗೆ ಈ ಕೇಸಿನ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಈ ಅಪಘಾತಕ್ಕೆ ಸಂಬಂಧಪಟ್ಟಂತೆ ಪೋಲಿಸರು ನನ್ನ ಹೇಳಿಕೆಯನ್ನು ಪಡೆದುಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಎಪಿಪಿ ಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದರು. ಅನುಮತಿ ನೀಡಲಾಗಿದೆ)**

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ**

ದಿನಾಂಕ 23.11.2015 ರಂದು ಸಂಜೆ 06.30 ಗಂಟೆ ಸಮಯದಲ್ಲಿ ನಾನು ನನ್ನ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದಾಗ ಆರೋಪಿ ತನ್ನ ಬಾಬ್ತು ಮೋಟಾರ್ ಸೈಕಲ್ ನಂಬರ ಕೆ ಎ 27/ಎಸ್-1822 ನ್ನು ಅತೀ ವೇಗವಾಗಿ ಮತ್ತು ಅಜಾಗರೂಕತೆಯಿಂದ ಚಲಾಯಿಸಿಕೊಂಡು ಬಂದು ಎದರುಗಡೆಯಿಂದ ಬರುತ್ತಿದ್ದ ಚಾಸಾ-6 ರವರು ತನ್ನ ಬಾಬ್ತು ಗಾಡಿ ನಂಬರ ಕೆ ಎ 27/ಈ ಈ-5882 ಕ್ಕೆ ಡಿಕ್ಕಿ ಪಡಿಸಿದ್ದು ಇದರಿಂದ ಆರೋಪಿ ಮತ್ತು ಚಾಸಾ-4 ರಿಂದ 6 ರವರಿಗೆ ತೀವ್ರ ಸ್ವರೂಪದ ಗಾಯಗಳು ಆದವು ಈ

ಅಪಘಾತದಿಂದ ಬಸವರಾಜ ದಯಾನಂದ ಹರ್ಲಾಪುರ ರವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವಾಗ ಮೃತ ಪಟ್ಟರು ಎಂದರೆ ಸರಿಯಲ್ಲ. ಈ ವಿಚಾರವನ್ನು ಚಾಸಾ-10 ಮತ್ತು 11 ರವರು ತಿಳಿಸಿ ನಾನು ಸಹ ಘಟನಾ ಸ್ಥಳಕ್ಕೆ ಹೋದೆನು ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಪೋಲಿಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಆ ಅಲ್ಲ ಗಳೆದ ಭಾಗವನ್ನು ನಿಪಿ-8 ಎಂದು ಗರುತಿಸಲಾಯಿತು. ಈ ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೊಪಿತರಿಗೆ ಸಹಾಯ ಮಾಡಲು ಗೊತ್ತಿಲ್ಲ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಶ್ರೀಃ ಎಸ್ ಜಿ ಟಿ ವಕೀಲರಿಂದ**

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೆ ಸರಿ ಇದೆ
ಎಂದು ಒಪ್ಪಿರುತ್ತಾರೆ.

Sd/-

ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು
ಸಾಕ್ಷಿಧಾರರ ಸಹಿ ಮತ್ತು ಜೆ.ಎಂ.ಎಫ್.ಸಿ, ಹಾನಗಲ್